ಆ) ಹಿಂದೆ ಉಡುಪಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಅಂದು ಆಗತ್ಯತೆಯನ್ನು ಪರಿಶೀಲಿಸಿ ವಿಭಜನೆ ಆಗತ್ಯವೆಂದು ಕಂಡು ಬಂದಿದ್ದರಿಂದ ಉಡುಪಿ ಉತ್ತರ ಮತ್ತು ದಕ್ಷಿಣ ವಲಯಗಳಾಗಿ ವಿಭಜಿತಗೊಳಿಸಲಾಗಿತ್ತು. ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಪ್ರಸ್ತುತ ರೇಂಜ್‌ಗಳ ವಿಭಜನೆಯನ್ನು ಪರಿಗಣಿಸಲಾಗುತ್ತಿಲ್ಲ.

ಉಳ್ಳಾಲ ಕ್ಷೇತ್ರದ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ಪೂರೈಕೆ

363 (585) ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಉಳ್ಳಾಲ ವಿಧಾನ ಸಭಾ ಕ್ಷೇತ್ರದ ಗ್ರಾಮಾಂತರ ಪ್ರದೇಶಗಳಾದ ಕೊಣಾಜೆ ಮತ್ತು ಇತರ 8 ಗ್ರಾಮಗಳಿಗೆ ಕುಡಿಯುವ ನೀರು ಪೂರೈಕೆ ಯೋಜನೆ ಯಾವ ಹಂತದಲ್ಲಿದೆ ?

ಆ) ಕೇಂದ್ರ ಸರ್ಕಾರ ಕುಡಿಯುವ ನೀರಿಗಾಗಿ ರಾಜ್ಯ ಸರ್ಕಾರಕ್ಕೆ ಕಳೆದ ವರ್ಷಕ್ಕಿಂತ 1998-99ರಲ್ಲಿ ಏಕ ಗಂಟಿನಿಂದ ಹಣ ಬಿಡುಗಡೆ ಮಾಡಿದ್ದರೂ ಈ ಕಾಮಗಾರಿಯನ್ನು ಅನುಷ್ಠಾನಗೊಳಿಸದಿರಲು ಕಾರಣವೇನು ?

ಇ) ಉಳ್ಳಾಲ ವಿಧಾನಸಭಾ ಕ್ಷೇತ್ರದಲ್ಲಿ ತೀವ್ರತರ ಕುಡಿಯುವ ನೀರಿನ ಅಭಾವವಿರುವುದರ ಜೊತೆಗೆ ಉಪ್ಪು ನೀರಿನಿಂದಾಗಿ ಜನರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ಪರಿಸ್ಥಿತಿಯನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳು ಯಾವುವು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಯೋಜನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ದಿನಾಂಕ : 1.4.98ರಿಂದ ಕೇಂದ್ರ ಸರ್ಕಾರವು ಸಬ್-ಮಿಷನ್ ಯೋಜನೆಗಳಿಗೆ ರಾಜ್ಯಕ್ಕೆ ಪ್ರತ್ಯೇಕವಾಗಿ ಹಣವನ್ನು ಬಿಡುಗಡೆ ಮಾಡುತ್ತಿಲ್ಲ. ತ್ವರಿತ ಗ್ರಾಮಾಂತರ ನೀರು ಸರಬರಾಜು ಯೋಜನೆಯ ವಾರ್ಷಿಕ ಅನುದಾನದಲ್ಲಿಯೇ ಶೇಕಡ 20 ರಷ್ಟು ಹಣವನ್ನು ಸಬ್-ಮಿಷನ್ ಯೋಜನೆಗಳಿಗೆ ಉಪಯೋಗಿಸಬಹುದಾಗಿದೆ. ಹಾಗೂ ಈ ಯೋಜನೆಗಳ ಅನುಷ್ಠಾನ ಕ್ಕಾಗಿ ಶೇಕಡ 50ರಷ್ಟು ವೆಚ್ಚವನ್ನು ರಾಜ್ಯ ಸರ್ಕಾರದಿಂದ ಭರಿಸಬೇಕಾಗುತ್ತದೆ.

ಇ) ಉಳ್ಳಾಲ ವಿಧಾನಸಭಾ ಕ್ಷೇತ್ರದ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಈ) ಗ್ರಾಮಗಳ ಜನಸಂಖ್ಯೆಗನುಗುಣವಾಗಿಯೋಜನೆಗಳನ್ನು ಒದಗಿಸಲಾಗಿದ್ದು, ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಿಗಳ ಸಂಗ್ರಹ

365 (618) ಶ್ರೀ ಕೆ.ಜಯರಾಮ ಶೆಟ್ಟಿ (ಉಳ್ಳಾಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಿಗಳ ಸಂಗ್ರಹ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಕೇಂದ್ರಗಳಿಗೆ ಔಷಧಿ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು?

ಇ) ಹುಚ್ಚು ನಾಯಿ ಕಚ್ಚಿದ ಸಂದರ್ಭದಲ್ಲಿ ಕೊಡುವ ಚುಚ್ಚು ಮದ್ದಿನ ವ್ಯವಸ್ಥೆ ಆರೋಗ್ಯ ಕೇಂದ್ರಗಳಲ್ಲಿದೆಯೆ ?

ಈ) ಇಂತಹ ಸಂದರ್ಭಗಳಲ್ಲಿ ಖಾಸಗಿ ಆಸ್ಪತ್ರೆಗಳಲ್ಲಿ ಒಂದೇ ಇಂಜೆಕ್ಷನ್ ಕೊಟ್ಟು ಗುಣಪಡಿಸುವ ವ್ಯವಸ್ಥೆ ಇರುವುದು. ಸರ್ಕಾರದ ಗಮನಕ್ಕೆ ಬಂದಿದೆಯೆ ?

ಉ) ಹಾಗಿದ್ದಲ್ಲಿ ಅಂಥ ವ್ಯವಸ್ಥೆಯನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ಆಳವಡಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೆ ?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ.

'ಆ) ಸರ್ಕಾರಿ ಔಷಧಿ ಮಳಿಗೆ ಬೆಂಗಳೂರು ಇವರಲ್ಲಿಇದ್ದ ದಾಸ್ತಾನಿನಿಂದ ಔಷಧಿಗಳನ್ನು ಸರಬರಾಜು ಮಾಡಿರುತ್ತದೆ. ಹಾಗೂ ಜಿಲ್ಲಾ ಆರೋಗ್ಯಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಮುಖಾಂತರ ಅವರಿಗೆ ಅವಶ್ಯಕವೆನಿಸಿದ ಔಷಧಿಗಳನ್ನು ಪಡೆದು ಕೊಳ್ಳಲು ಅನುದಾನದ ಶೇ.60ರಷ್ಟನ್ನು ಖರ್ಚು ಮಾಡಲು ಅವಕಾಶ ಮಾಡಿಕೊಡಲಾಗಿದೆ.

ಇ) ಇದೆ.

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸರಬರಾಜು

625 (366) ಶ್ರೀ ಕೆ.ಜಯರಾಮಶೆಟ್ಟಿ (ಉಳ್ಳಾಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಗ್ರಾಮೀಣ ಪ್ರದೇಶಗಳ ನೀರು ಸರಬರಾಜು ಯೋಜನೆಗಳಿಗೆ ಸರ್ಕಾರ ಯಾವ ಯಾವ ತರಹದ ಪಂಪುಗಳನ್ನು ಖರೀದಿ ಮಾಡುತ್ತದೆ ?

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇತ್ತೀಚಿಗೆ ಅಟ್ಲಾಂಟ ಪಂಪ್‌ಸೆಟ್‌ಗಳನ್ನು ಖರೀಧಿಸಿ ಅಳವಡಿಸಿದ ಒಂದು ಎಂಬ ತಿಂಗಳಿನಲ್ಲಿಯೇ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಇ) ಹಾಗಿದ್ದಲ್ಲಿ ಇದರಿಂದ ಗ್ರಾಮಾಂತರ ಪ್ರದೇಶಗಳ ಕಿರು ನೀರು ಸರಬರಾಜು ಯೋಜನೆಗಳಿಂದ ಕುಡಿಯುವ ನೀರು ಒದಗಿಸಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?